**All India Radio: Bangalore**
**National Bulletin In Kannada**
**13.10.2025 07.35 a.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**13.10.2025 07.35 a.m.**
**<><><><>**

ಮುಖ್ಯಾಂಶಗಳು

1. ಎರಡನೇ ಹಂತದ ಬಿಹಾರ ವಿಧಾನಸಭೆ ಚುನಾವಣೆಗೆ ಇಂದು ಅಧಿಸೂಚನೆ ಪ್ರಕಟ ; ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭ
2. ಕೇಂದ್ರ ಸಚಿವ ಅಮಿತ್ ಶಾ ಜೈಪುರ ಪ್ರವಾಸ ; ೯ ಸಾವಿರದ ೩೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಚಾಲನೆ
3. ರಾಷ್ಟ್ರವ್ಯಾಪಿ ವಿಕಸಿತ ಭಾರತ ಬಿಲ್ಡಥಾನ್ ೨೦೨೫ ಇಂದು ಆಯೋಜನೆ ; ಶಾಲಾ ಮಟ್ಟದಲ್ಲಿ ನಾವೀನ್ಯತೆಗೆ ಉತ್ತೇಜನ
4. ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ : ಆಸ್ಟ್ರೇಲಿಯಾ ವಿರುದ್ಧ ಭಾರತಕ್ಕೆ ೩ ವಿಕೆಟ್‌ಗಳ ಆಘಾತಕಾರಿ ಸೋಲು

<><><><>

ಬಿಹಾರದಲ್ಲಿ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಇಂದು ಅಧಿಸೂಚನೆ ಹೊರಡಿಸಲಾಗುವುದು. ಇದರೊಂದಿಗೆ, ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಎರಡನೇ ಹಂತದ ನಾಮಪತ್ರ ಸಲ್ಲಿಸಲು ಇದೇ ೨೦ ಕೊನೆಯ ದಿನವಾಗಿದೆ. ಇದೇ ೨೧ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ೨೩ ಕೊನೆಯ ದಿನವಾಗಿದೆ. ಈ ಹಂತದ ಮತದಾನ ನವೆಂಬರ್ ೧೧ ರಂದು ನಡೆಯಲಿದೆ. ಬೆಳಗ್ಗೆ ೧೧ ರಿಂದ ಮಧ್ಯಾಹ್ನ ೩ ರವರೆಗೆ ನಾಮಪತ್ರ ಸಲ್ಲಿಸಬಹುದು. ಚುನಾವಣಾ ಆಯೋಗವು ನಾಮಪತ್ರ ಕೇಂದ್ರಗಳಲ್ಲಿ ಕಟ್ಟುನಿಟ್ಟಿನ ಭದ್ರತಾ ವ್ಯವಸ್ಥೆಗಳನ್ನು ಮಾಡಿದೆ. ೨೪೩ ಸದಸ್ಯ ಬಲದ ಬಿಹಾರ ವಿಧಾನಸಭಾ ಚುನಾವಣೆಯ ಎರಡೂ ಹಂತಗಳ ಮತ ಎಣಿಕೆ ನವೆಂಬರ್ ೧೪ ರಂದು ನಡೆಯಲಿದೆ. ಒಟ್ಟು ೭.೪೨ ಕೋಟಿ ಮತದಾರರು ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಮತ ಚಲಾಯಿಸಲಿದ್ದಾರೆ.

<><><><>

ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿ ನಿನ್ನೆ ರಾತ್ರಿ ಭಾರತೀಯ ಜನತಾ ಪಕ್ಷದ ಕೇಂದ್ರ ಚುನಾವಣಾ ಸಮಿತಿ-ಸಿಇಸಿ ಸಭೆ ಸೇರಿತ್ತು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಮತ್ತು ಪಕ್ಷದ ಇತರ ಹಿರಿಯ ನಾಯಕರು ಸಭೆಯಲ್ಲಿ ಭಾಗವಹಿಸಿದ್ದರು. ಇದು ಬಿಹಾರ ವಿಧಾನಸಭಾ ಚುನಾವಣೆಗೆ ಪಕ್ಷದ ಕಾರ್ಯತಂತ್ರ ಮತ್ತು ಅಭ್ಯರ್ಥಿಗಳ ಪಟ್ಟಿಯನ್ನು ಅಂತಿಮಗೊಳಿಸುವ ಗುರಿಯನ್ನು ಹೊಂದಿತ್ತು. ಬಿಹಾರ ಚುನಾವಣೆಗೆ ಎನ್‌ಡಿಎಯ ಸೀಟು ಹಂಚಿಕೆ

ಸೂತ್ರವನ್ನು ಘೋಷಿಸಿದ ನಂತರ ಬಿಜೆಪಿಯ ಸಿಇಸಿ ಸಭೆ ನಡೆಯಿತು. ಆಡಳಿತಾರೂಢ ಎನ್‌ಡಿಎ ನಿನ್ನೆ ಬಿಹಾರ ವಿಧಾನಸಭಾ ಚುನಾವಣೆಗೆ ತನ್ನ ಸೀಟು ಹಂಚಿಕೆ ವ್ಯವಸ್ಥೆಯನ್ನು ಘೋಷಿಸಿತು. ಒಪ್ಪಂದದ ಪ್ರಕಾರ, ಬಿಜೆಪಿ ಮತ್ತು ಜೆಡಿಯು ತಲಾ ೧೦೧ ಸ್ಥಾನಗಳಲ್ಲಿ ಸ್ಪರ್ಧಿಸಲಿದ್ದು, ಲೋಕ ಜನಶಕ್ತಿ ಪಕ್ಷ ರಾಮ್ ವಿಲಾಸ್, ೨೯ ಸ್ಥಾನಗಳಲ್ಲಿ ಸ್ಪರ್ಧಿಸಲಿದೆ. ರಾಷ್ಟ್ರೀಯ ಲೋಕ ಮೋರ್ಚಾ ಮತ್ತು ಹಿಂದೂಸ್ತಾನಿ ಅವಾಮ್ ಮೋರ್ಚಾ ಎಚ್‌ಎಎಂ ಪಕ್ಷಗಳಿಗೆ ತಲಾ ಆರು ಸ್ಥಾನಗಳನ್ನು ಹಂಚಿಕೆ ಮಾಡಲಾಗಿದೆ. ತೇಜಸ್ವಿ ಯಾದವ್ ನೇತೃತ್ವದ ರಾಷ್ಟ್ರೀಯ ಜನತಾದಳ - ಆರ್‌ಜೆಡಿ, ಕಾಂಗ್ರೆಸ್, ಸಿಪಿಐ-ಎಂಎಲ್ ಲಿಬರೇಶನ್, ಸಿಪಿಐ, ಸಿಪಿಐ-ಎಂ ಮತ್ತು ಮುಖೇಶ್ ಸಹಾನಿ ನೇತೃತ್ವದ ವಿಕಾಸಶೀಲ್ ಇನ್ಸಾನ್ ಪಾರ್ಟಿ-ವಿಐಪಿ ಗಳನ್ನು ಒಳಗೊಂಡಿರುವ ವಿರೋಧ ಪಕ್ಷಗಳ ಐಎನ್‌ಡಿಐ ಮೈತ್ರಿಕೂಟ ತನ್ನ ಸೀಟು ಹಂಚಿಕೆ ಸೂತ್ರವನ್ನು ಇನ್ನೂ ಅಂತಿಮಗೊಳಿಸಿಲ್ಲ, ಆರ್‌ಜೆಡಿ ಮತ್ತು ಕಾಂಗ್ರೆಸ್ ಸೀಟು ಹಂಚಿಕೆಯನ್ನು ಅಂತಿಮಗೊಳಿಸಲು ಮಾತುಕತೆಯಲ್ಲಿ ತೊಡಗಿವೆ ಎಂದು ವರದಿಗಳು ಸೂಚಿಸುತ್ತವೆ. ಬಿಹಾರ ವಿಧಾನಸಭಾ ಚುನಾವಣೆ ನವೆಂಬರ್ ೬ ಮತ್ತು ನವೆಂಬರ್ ೧೧ ರಂದು ಎರಡು ಹಂತಗಳಲ್ಲಿ ನಡೆಯಲಿದ್ದು, ಮತ ಎಣಿಕೆ ನವೆಂಬರ್ ೧೪ ರಂದು ನಡೆಯಲಿದೆ.

<><><><>

ಪ್ರಧಾನಮಂತ್ರಿ ಮತ್ತು ಹಿರಿಯ ಬಿಜೆಪಿ ನಾಯಕ ನರೇಂದ್ರ ಮೋದಿ ನಾಡಿದ್ದು, ಇದೇ ೧೫ ರಂದು ಬಿಹಾರದ ತಮ್ಮ ಬೂತ್ ಮಟ್ಟದ ಪಕ್ಷದ ಕಾರ್ಯಕರ್ತರೊಂದಿಗೆ ಸಂವಾದ ನಡೆಸಲಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪಕ್ಷದ ಕಾರ್ಯಕರ್ತರನ್ನು ಮೇರಾ ಬೂತ್ ಸಬ್ಸೆ ಮಜ್‌ಬೂತ್ ಅಭಿಯಾನಕ್ಕೆ ಸೇರಲು ಮತ್ತು ಅವರ ಸಲಹೆಗಳನ್ನು ಹಂಚಿಕೊಳ್ಳಲು ವಿನಂತಿಸಿದರು. ಅವರ ಸಲಹೆಗಳ ಕುರಿತು ಕೆಲವು ಆಯ್ದ ಕಾರ್ಯಕರ್ತರೊಂದಿಗೆ ನೇರವಾಗಿ ಸಂವಹನ ನಡೆಸುವುದಾಗಿ ಪ್ರಧಾನಿ ತಿಳಿಸಿದ್ದಾರೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಒಂದು ದಿನದ ಭೇಟಿಗಾಗಿ ಜೈಪುರಕ್ಕೆ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಹೊಸ ಅಪರಾಧ ಕಾನೂನುಗಳಾದ ಭಾರತೀಯ ನ್ಯಾಯ ಸಂಹಿತ, ಭಾರತೀಯ ನಾಗರಿಕ ಸುರಕ್ಷಾ ಸಂಹಿತ ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ ಅನುಷ್ಠಾನಗೊಂಡು ಒಂದು ವರ್ಷ ಪೂರ್ಣಗೊಂಡ ಅಂಗವಾಗಿ ಆಯೋಜಿಸಲಾಗಿರುವ ರಾಜ್ಯಮಟ್ಟದ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

**ಈ ಕುರಿತು ಒಂದು ವರದಿ : ಅಭಯ್ (೧ ನಿಮಿಷ ೧೫ ಸೆಕೆಂಡ್‌ಗಳು)**

ಇಂದಿನಿಂದ ಇದೇ ೧೮ ರವರೆಗೆ ನಡೆಯುವ ಆರು ದಿನಗಳ ಪರಾಧ ಕಾನೂನುಗಳ ಕುರಿತಾದ ಪ್ರದರ್ಶನವು, ಹೊಸ ಕಾನೂನುಗಳ ಪ್ರಮುಖ ನಿಬಂಧನೆಗಳನ್ನು ಮತ್ತು ರಾಜಸ್ಥಾನದಾದ್ಯಂತ ಅವುಗಳ ಅನುಷ್ಠಾನದಲ್ಲಿ ಆಗಿರುವ ಪ್ರಗತಿಯನ್ನು ಪ್ರದರ್ಶಿಸುತ್ತದೆ. ಪ್ರದರ್ಶನವನ್ನು ಉದ್ಘಾಟಿಸಿದ ನಂತರ ಸಚಿವರು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ಸಂದರ್ಭದಲ್ಲಿ, ಅವರು ರೈಸಿಂಗ್ ರಾಜಸ್ಥಾನ್ ಜಾಗತಿಕ ಹೂಡಿಕೆ ಶೃಂಗಸಭೆ ೨೦೨೪ ರ ಅಡಿಯಲ್ಲಿ ಸ್ವೀಕರಿಸಿದ ನಾಲ್ಕು ಲಕ್ಷ ಕೋಟಿ ರೂಪಾಯಿಗಳ ಒಪ್ಪಂದಗಳ ಶಿಲಾನ್ಯಾಸ

ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಇದಲ್ಲದೆ, ಅವರು ಒಂಬತ್ತು ಸಾವಿರದ ಮುನ್ನೂರು ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಗೃಹ ಸಚಿವರು ವಿದ್ಯಾರ್ಥಿಗಳಿಗೆ ಸಮವಸ್ತ್ರಕ್ಕಾಗಿ ೨೬೦ ಕೋಟಿ ರೂಪಾಯಿಗಳನ್ನು ಮತ್ತು ಡೈರಿ ಉತ್ಪಾದಕರಿಗೆ ಹಾಲು ಸಬ್ಸಿಡಿಯಾಗಿ ೩೬೪ ಕೋಟಿ ರೂಪಾಯಿಗಳನ್ನು ವರ್ಗಾವಣೆ ಪ್ರಕ್ರಿಯೆಗೂ ಚಾಲನೆ ನೀಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ೧೫೦ ಯೂನಿಟ್‌ಗಳ ಉಚಿತ ವಿದ್ಯುತ್ ಯೋಜನೆಯಡಿ ನೋಂದಣಿಗಳಿಗೆ ಚಾಲನೆ ನೀಡುವುದರ ಜೊತೆಗೆ, ಮಹಿಳಾ ಸುರಕ್ಷತಾ ಗಸ್ತುಗಾಗಿ ಎಫ್‌ಎಸ್‌ಎಲ್ ವಾಹನಗಳು, ಸ್ಕೂಟರ್‌ಗಳು ಮತ್ತು ಮೋಟಾರ್‌ಸೈಕಲ್‌ಗಳಿಗೆ ಹಸಿರು ನಿಶಾನೆ ತೋರಲಾಗುವುದು. ಮುಖ್ಯಮಂತ್ರಿ ಭಜನ್‌ಲಾಲ್ ಶರ್ಮಾ, ರಾಜಸ್ಥಾನ ಹೈಕೋರ್ಟ್‌ನ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಸಂಜೀವ್ ಪ್ರಕಾಶ್ ಶರ್ಮಾ ಮತ್ತಿತರರು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ಭಾರತದ ಅತಿದೊಡ್ಡ ಶಾಲಾ ಹ್ಯಾಕಥಾನ್ ಆದ 'ವಿಕಸಿತ ಭಾರತ ಬಿಲ್ಡಥಾನ್ ೨೦೨೫' ಇಂದು ಬೆಳಗ್ಗೆ ೧೦ ರಿಂದ ರಾತ್ರಿ ೧೧ ರವರೆಗೆ ನಡೆಯಲಿದೆ. ವಿಕಸಿತ ಭಾರತ್ ಬಿಲ್ಡಥಾನ್ ಒಂದು ರಾಷ್ಟ್ರವ್ಯಾಪಿ ಉಪಕ್ರಮವಾಗಿದ್ದು, ೬ ರಿಂದ ೧೨ನೇ ತರಗತಿಯ ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ ಮತ್ತು ಸಮಸ್ಯೆ ಪರಿಹರಿಸುವ ಕೌಶಲ್ಯಗಳನ್ನು ಪ್ರದರ್ಶಿಸಲು, ಸಬಲೀಕರಣಗೊಳಿಸಲು ಶಾಲೆಗಳು ಮತ್ತು ಶಿಕ್ಷಕರನ್ನು ಆಹ್ವಾನಿಸುತ್ತದೆ. ಆತ್ಮನಿರ್ಭರ ಭಾರತ, ಸ್ವದೇಶಿ, ವೋಕಲ್ ಫಾರ್ ಲೋಕಲ್ ಮತ್ತು ಸಮೃದ್ಧ ಭಾರತ ಎಂಬ ನಾಲ್ಕು ವಿಷಯಗಳ ಮೇಲೆ ಮೂಲಮಾದರಿಗಳನ್ನು ರೂಪಿಸಲು ಅಥವಾ ನಿರ್ಮಿಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಮೂಲಕ ಶಾಲಾ ಮಟ್ಟದಲ್ಲಿ ನಾವೀನ್ಯತೆಯ ಸಂಸ್ಕೃತಿಯನ್ನು ಬಲಪಡಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ. ಈ ಕಾರ್ಯಕ್ರಮವನ್ನು ಶಿಕ್ಷಣ ಸಚಿವಾಲಯವು ಅಟಲ್ ಇನ್ನೋವೇಶನ್ ಮಿಷನ್ ಎಐಎಂ ಮತ್ತು ನೀತಿ ಆಯೋಗದ ಸಹಯೋಗದೊಂದಿಗೆ ಆಯೋಜಿಸುತ್ತಿದೆ. ಇದನ್ನು ಅಧಿಕೃತ ಪೋರ್ಟಲ್‌ಗಳಾದ vbb.mic.gov.in ಅಥವಾ schoolinnovationmarathon.org/registration ಮೂಲಕ ದೇಶಾದ್ಯಂತ ನೇರ ಪ್ರಸಾರ ಮಾಡಲಾಗುತ್ತದೆ. ಬಿಲ್ಡಥಾನ್ ೧ ಕೋಟಿ ರೂಪಾಯಿ ಪ್ರಶಸ್ತಿಯನ್ನು ಒಳಗೊಂಡಿದೆ, ಇದನ್ನು ೧೦ ರಾಷ್ಟ್ರೀಯ ಮಟ್ಟದ ವಿಜೇತರು, ೧೦೦ ರಾಜ್ಯ ಮಟ್ಟದ ವಿಜೇತರು ಮತ್ತು ೧ ಸಾವಿರ ಜಿಲ್ಲಾ ಮಟ್ಟದ ವಿಜೇತರಿಗೆ ವಿತರಿಸಲಾಗುತ್ತದೆ.

<><><><>

ಇಸ್ಕಾನ್ ಸಂಸ್ಥೆಯು ದೇಶಾದ್ಯಂತ 'ಉದ್ಧಾರ್-ನಶೆಮುಕ್ತ ಯುವ ಮತ್ತು ಸಂಸ್ಕಾರಯುಕ್ತ ಭಾರತ' ಅಭಿಯಾನವನ್ನು ಪ್ರಾರಂಭಿಸಿದೆ. ನಶೆ ಮುಕ್ತ ಭಾರತ ನಿರ್ಮಿಸುವ ನಿಟ್ಟಿನಲ್ಲಿ ಈ ಪ್ರಯತ್ನಗಳಿಗಾಗಿ ಇಸ್ಕಾನ್ ಸಂಸ್ಥೆಯನ್ನು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯಾ ಶ್ಲಾಘಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಇಸ್ಕಾನ್ ಆಯೋಜಿಸಿದ್ದ ಉದ್ಧಾರ್ ಯುವ ಜನೋತ್ಸವದಲ್ಲಿ ಭಾಗವಹಿಸಿದ ನಂತರ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಉಪಕ್ರಮದಡಿಯಲ್ಲಿ ೧೫ ಸಾವಿರಕ್ಕೂ ಹೆಚ್ಚು ಯುವಕರು, ಮಾದಕದ್ರವ್ಯಗಳಿಂದ ಮುಕ್ತರಾಗುವ ಪ್ರತಿಜ್ಞೆ ಮಾಡಿದ್ದಾರೆ ಎಂದು ತಿಳಿಸಿದರು.

**ಧ್ವನಿ : ಮನ್ಸುಖ್ ಮಾಂಡವೀಯಾ ( ೨೧ ಸೆಕೆಂಡ್‌ಗಳು)**

ಈ ಅಭಿಯಾನವು ೧೫ ಲಕ್ಷ ಯುವಕರನ್ನು ಭಾರತದ ಆಧ್ಯಾತ್ಮಿಕ ಪರಂಪರೆ ಮತ್ತು ಸಾಂಸ್ಕೃತಿಕ ಜ್ಞಾನದೊಂದಿಗೆ ಸಂಪರ್ಕಿಸುವ ಮೂಲಕ ಮಾದಕವ್ಯಸನದ ಹಿಡಿತದಿಂದ ರಕ್ಷಿಸುವ ಗುರಿ ಹೊಂದಿದೆ.

<><><><>

ಗಾಜಾದಲ್ಲಿ ಯುದ್ಧ ಕೊನೆಗಾಣಿಸಲು ಶಾಂತಿ ಒಪ್ಪಂದ ಅಂತಿಮಗೊಳಿಸುವ ಗುರಿಯನ್ನು ಹೊಂದಿರುವ ಅಂತಾರಾಷ್ಟ್ರೀಯ ಶೃಂಗಸಭೆ ಇಂದು ಈಜಿಪ್ಟ್‌ನ ಶರ್ಮ್ ಎಲ್‌ಶೇಖ್‌ನ ರೆಡ್ ಸೀ ರೆಸಾರ್ಟ್ ಸಿಟಿಯಲ್ಲಿ ನಡೆಯಲಿದೆ. ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತಾಹ್ ಅಲ್-ಸಿಸಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಭೆಯ ಜಂಟಿ ಅಧ್ಯಕ್ಷತೆ ವಹಿಸಲಿದ್ದು, ೨೦ಕ್ಕೂ ಅಧಿಕ ರಾಷ್ಟ್ರಗಳ ನಾಯಕರು ಪಾಲ್ಗೊಳ್ಳುವ ನಿರೀಕ್ಷೆಯಿದೆ.

<><><><>

ವಿಶಾಖಪಟ್ಟಣದ ಎಸಿಎ-ವಿಡಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ಭಾರತೀಯ ವನಿತೆಯರ ತಂಡ ಆಸ್ಟ್ರೇಲಿಯಾ ತಂಡದ ವಿರುದ್ಧ ೩ ವಿಕೆಟ್‌ಗಳಿಂದ ಸೋಲನುಭವಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ೪೮.೫ ಓವರ್‌ಗಳಲ್ಲಿ ೩೩೦ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಗೆಲುವಿನ ಗುರಿ ಬೆನ್ನತ್ತಿದ್ದ ಆಸ್ಟ್ರೇಲಿಯಾ, ೪೯ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೩೩೧ ರನ್ ಗಳಿಸಿ ಗೆಲುವು ದಾಖಲಿಸಿತು. ಇದೇ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಹಾಗೂ ಬಾಂಗ್ಲಾದೇಶ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>